ಮೂರನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ,
ದಕ್ಷಿಣ ಕನ್ನಡ, ಮಂಗಳೂರು.

**ಸೆಷನ್ಸ್ ಕೇಸ್ ನಂಬ್ರ 76/2023**

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಜಗದೀಶ್ | ಪ್ರಾಸಾಃ 14 |
| ತಂದೆಯ ಹೆಸರು | : | ರಾಮಣ್ಣ ಗೌಡ | ಚಾಸಾಃ 26 |
| ಪ್ರಾಯ | : | 47 ವರ್ಷ | **ದಿನಾಂಕಃ 03.02.2026** ರಂದು ಸಾಕ್ಷಿದಾರರಿಗೆ ಪ್ರಮಾಣವಚನ ಬೋಧಿಸಲಾಯಿತು. |
| ಉದ್ಯೋಗ | : | ಹೆಚ್ .ಸಿ ಬಜ್ಪೆ ಪೊಲೀಸ್ ಠಾಣೆ | |
| ವಾಸಸ್ಥಳ | : | ಬಜ್ಪೆ, ಮಂಗಳೂರು | |

**ಮುಖ್ಯ ವಿಚಾರಣೆಃ ಮಾನ್ಯ ಸರಕಾರಿ ಅಭಿಯೋಜಕರಿಂದಃ**

ನಾನು ಡಿಸೆಂಬರ್ 2019 ರಿಂದ ಇಲ್ಲಿಯವರೆಗೆ ಮಂಗಳೂರಿನ ಬಜ್ಪೆ ಪೊಲೀಸ್ ಠಾಣೆ ಯಲ್ಲಿ ಹೆಚ್ ಸಿ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

2. ದಿನಾಂಕ 28.11.2022 ರಂದು ನಾನು ಹಗಲು ಠಾಣಾ ಪ್ರಭಾರ ಕರ್ತವ್ಯದಲ್ಲಿದ್ದ ಸಮಯ ಬೆಳಗ್ಗೆ 9.30 ಗಂಟೆಗೆ, ಚಾಸಾ-28 ರವರು ತಕ್ಷೀರು ಸ್ಥಳದಿಂದ ಚಾಸಾ-1 ರವರ ಹೇಳಿಕೆಯನ್ನು ಪಡೆದು, ಪಿಸಿ 2496 ರವರ ಮೂಲಕ ಠಾಣೆಗೆ ಕಳುಹಿಸಿಕೊಟ್ಟಿದ್ದು ಸದರಿ ಹೇಳಿಕೆಯ ಆಧಾರದಲ್ಲಿ ಠಾಣಾ ಅಪರಾಧ ಸಂಖ್ಯೆ 143/2022 ರಲ್ಲಿ ಪ್ರಕರಣ ದಾಖಲಿಸಿ, ಮೂಲ ಪ್ರತಿಯನ್ನು ಚಾಸಾ-27 ರವರ ಮೂಲಕ ಮಾನ್ಯ ನ್ಯಾಯಾಲಯಕ್ಕೆ ಮತ್ತು ಪ್ರತಿಗಳನ್ನು ನನ್ನ ಮೇಲಾಧಿಕಾರಿಯವರಿಗೆ ಕಳುಹಿಸಿರುತ್ತೇನೆ. ಸಾಕ್ಷಿ ಗುರುತಿಸಿದ ಚಾಸಾ-1 ರವರ ಹೇಳಿಕೆಯನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದ್ದು ಸಾಕ್ಷಿಯ ಸಹಿಯನ್ನು **ನಿಪಿ-1(ಬಿ)** ಎಂದು ಗುರುತಿಸಲಾಯಿತು. ಸಾಕ್ಷಿ ಗುರುತಿಸಿದ ಪ್ರ.ವ. ವರದಿಯನ್ನು **ನಿಪಿ-13** ಎಂದು , ಸಾಕ್ಷಿಯ ಸಹಿಯನ್ನು ನಿಪಿ-13(ಎ) ಎಂದು

ಗುರುತಿಸಲಾಯಿತು. ನಂತರ ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ-28 ರವರಿಗೆ ಹಸ್ತಾಂತರಿಸಿರುತ್ತೇನೆ.

**<u>ಪಾಟೀ ಸವಾಲುಃ ಆರೋಪಿ ಪರ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ವಕೀಲರಾದ ಶ್ರೀ ಕೆ.ಡಿ.ಎಸ್. ವಕೀಲರಿಂದಃ</u>**-

2. ಚಾಸಾ-1 ರವರ ಹೇಳಿಕೆಯನ್ನು ಯಾರು ಬರೆದಿರುತ್ತಾರೆಂದು ಗೊತ್ತಿಲ್ಲ, ನಾನು ಆ ಸಮಯ ಸ್ಥಳದಲ್ಲಿ ಇರಲಿಲ್ಲ. ಸದರಿ ಹೇಳಿಕೆಯನ್ನು ಪಿಸಿ 2496 ರವರು ನನಗೆ ಠಾಣೆಯಲ್ಲಿ ನೀಡಿರುತ್ತಾರೆ. ನಿಪಿ-13 ರ ಪ್ರತಿಯನ್ನು ನಾನು ಹೇಳಿಕೆ ಕೊಟ್ಟವರಿಗೆ ತಕ್ಷಣದಲ್ಲಿ ಕೊಟ್ಟಿರುವುದಿಲ್ಲ. ನಿಪಿ-13 ನ್ನು ದಾಖಲು ಮಾಡುವ ಸಮಯದಲ್ಲಿ ನಿಪಿ-1 ರ ಹೇಳಿಕೆಯನ್ನು ಯಾರು ಬರೆದಿರುತ್ತಾರೆಂ ದು ಕೇಳಿರುವುದಿಲ್ಲ. ನಿಪಿ-1 ರ ಹೇಳಿಕೆಯನ್ನು ಠಾಣೆಯಲ್ಲಿ ತಯಾರು ಮಾಡಿ ಅಲ್ಲೇ ಸಹಿ ಪಡೆದುಕೊಳ್ಳಲಾಗಿದೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆಃ</u>** ಇಲ್ಲ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

ಮೂರನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ದ.ಕ., ಮಂಗಳೂರು.